ಸಾಕ್ಷಿಯನ್ನು ದಿಃ **19.06.2024** ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ 2 ಮತ್ತು 3 ನೇ ಪ್ರತಿವಾದಿಗಳ ಪರ ಶ್ರೀ ಸಿ.ಆರ್. ವಕೀಲರಿಂದಃ-

ನಾನು ನಿಪಿ-1 ರಿಂದ 5 ರ ದಾಖಲೆಗಳನ್ನು ಈ ಕೇಸಿಗೋಸ್ಕರ ಸೃಷ್ಟಿ ಮಾಡಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ. ಈ ದಾವೆಯನ್ನು 2022 ರಲ್ಲಿ ದಾಖಲಿಸಿದ್ದೇನೆ. ದಾವೆ ಹಾಕುವ ಕಾಲಕ್ಕೆ ಚಾಲ್ತಿಯಲ್ಲಿದ್ದ ದಾವಾ ಸ್ವತ್ತಿನ ಪಹಣಿಯನ್ನು ಹಾಜರುಪಡಿಸಲು ತೊಂದರೆ ಇತ್ತೇ ಎಂದರೆ ಇರಲಿಲ್ಲ. ನಾನು ಹಾಜರುಪಡಿಸಿದ ದಾವಾ ಸ್ವತ್ತಿನ 2021-22 ನೇ ಸಾಲಿನ ಪಹಣಿಯ ಕಾಲಂ ನಂ.9 ರಲ್ಲಿ ಯಾರದ್ದೆ ಹೆಸರು ಇಲ್ಲ ಎಂದರೆ ಸರಿಯಲ್ಲ. ಸದರಿ ಪಹಣಿಯ ಕಾಲಂ ನಂ.12 ರಲ್ಲಿ ವ್ಯವಸಾಯಗಾರನ ಹೆಸರು ನಮೂದಾಗಿಲ್ಲ ಎಂದರೆ ಸರಿಯಲ್ಲ.

5 ನೇ ಪ್ರತಿವಾದಿ ನನ್ನ ಅಣ್ಣ. ನನ್ನ ಅಣ್ಣ 5 ನೇ ಪ್ರತಿವಾದಿ ಈ ದಾವೆಯಲ್ಲಿ ಏನು ಪ್ರತಿವಾದ ಪತ್ರ ಸಲ್ಲಿಸಿದ್ದಾರೆ ಎಂದು ತಿಳಿದುಕೊಂಡಿದ್ದೇನೆ. 5 ನೇ ಪ್ರತಿವಾದಿ ಪ್ರತಿವಾದ ಪತ್ರದಲ್ಲಿ ಹೇಳಿರುವ ವಿಷಯಗಳೆಲ್ಲ ಸತ್ಯವಾಗಿದೆ ಮತ್ತು ನಾನು ತಿಳಿದುಕೊಂಡಿದ್ದೇನೆ ಎಂದರೆ 5 ನೇ ಪ್ರತಿವಾದಿ ಯಾವ ವಿಚಾರಗಳನ್ನು ನನಗೆ ಹೇಳಿಲ್ಲ. 2 ಮತ್ತು 3 ನೇ ಪ್ರತಿವಾದಿಯರು ಏನು ಪ್ರತಿವಾದ ಪತ್ರ ಸಲ್ಲಿಸಿದ್ದಾರೆ ಎಂದು ಕೇಳಿ ತಿಳಿದುಕೊಂಡಿದ್ದೀರಾ ಎಂದರೆ ಅವರಿಗೂ ನನಗೂ ಸಂಬಂಧ ಇಲ್ಲ. ದಾವಾ ಸರ್ವೇ ನಂಬರ 50 ರ ಆಜೂಬಾಜೂವಿನಲ್ಲಿರುವ ದಾವಾ ಜಮೀನನ್ನು ಸೇರಿಸಿ ಸುಮಾರು 25-30 ಎಕರೆ ವಸತಿ ಉದ್ದೇಶಕ್ಕಾಗಿ ಪರಿವರ್ತನೆಗೊಂಡ ಜಮೀನನ್ನು 2 ಮತ್ತು 3 ನೇ ಪ್ರತಿವಾದಿಯರು ಖರೀದಿಸಿ ಬಡಾವಣೆ ನಿರ್ಮಾಣ ಮಾಡಿದ್ದಾರೆ ಎಂದರೆ ಸಾಕ್ಷಿಯು ಬೇರೆಯವರು ಬಡಾವಣೆ ಮಾಡಿರಬಹುದು, ನಮ್ಮ ಜಮೀನನ್ನು ನಾವು ಮಾರಾಟ ಮಾಡಿಲ್ಲ ಎನ್ನುತ್ತಾರೆ.

ಮುಂದುವರೆದ ಪಾಟೀ ಸವಾಲನ್ನು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

(ಅನಿತ)
ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.